**1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ರಾಣೇಬೆನ್ನೂರು.**

**CC No.** 1320/2025

| | | |
|---|---|---|
| ಸಾಕ್ಷಿದಾರರ ಹೆಸರು | : ಸಂಜೀವ್‌ರೆಡ್ಡಿ ಕೋಟಿ | ***P.W-1*** |
| ತಂದೆಯ ಹೆಸರು | : ಬಸವರೆಡ್ಡಿ | ***C.W- 3*** |
| ವಯಸ್ಸು | : 46 ವರ್ಷ | |
| ಉದ್ಯೋಗ | : ವ್ಯವಸಾಯ | |
| ವಾಸ | : ದೇವಗೊಂಡನಕಟ್ಟೆ<br>ತಾಃ ರಾಣೇಬೆನ್ನೂರು | |

**ದಿನಾಂಕಃ 25-11-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸರ್ಕಾರಿ ಸಹಾಯಕ ಅಭಿಯೋಜಕರವರಿಂದಃ**

ಸಾಕ್ಷಿಗೆ ಈಗ ಒಂದು ದಾಖ್ಲೆಯನ್ನು ತೋರಿಸಿದ್ದು, ಆ ದಾಖಲೆಯಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಆ ದಾಖಲೆ ಘಟನಾ ಸ್ಥಳದ ಪಂಚನಾಮೆಯಾಗಿದ್ದು, ಅದನ್ನು ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ಕ್ಕೆ 2024 ರಲ್ಲಿ ಮೈಕ್ರೋ ಫ್ಯಾಕ್ಟರಿ ಹತ್ತಿರ ದೇವಗೊಂಡನಕಟ್ಟಿಯ ಕ್ರಾಸ್ ಹತ್ತಿರ ಸಹಿ ಹಾಕಿರುತ್ತೇನೆ. ನಿಪಿ-1 ರಲ್ಲಿ ಏನು ಬರೆದಿದೆ ಎಂದು ನನಗೆ ಮಾಹಿತಿ ಇರುವುದಿಲ್ಲ. ಆಗ ಚಾಸಾ-1 ಮತ್ತು 2 ರವರು ಹಾಜರಿದ್ದರು. ಸ್ಥಳದಲ್ಲಿ ಪೋಟೊ ತೆಗೆದಿರುತ್ತಾರೆ. ಸಾಕ್ಷಿ ಪೋಟೋ ನೋಡಿ ಗುರುತಿಸಿದ್ದು, ಅದನ್ನು ನಿಪಿ-2 ಎಂದು ಗುರುತಿಸಲಾಯಿತು.ಯಾವ ಉದ್ದೇಶಕ್ಕೆ ಪೋಟೊ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

(**ಈ ಹಂತದಲ್ಲಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಎಪಿಪಿ ಅವರು ಪಾಟೀ ಸವಾಲಿಗೆ ಅನುಮತಿಯನ್ನು ಕೋರಿದ್ದು, ಸದರಿ ಮನವಿಯನ್ನು ಅಂಗೀಕರಿಸಲಾಗಿದೆ.**)

**ಪಾಟೀ ಸವಾಲುಃ ಸರ್ಕಾರಿ ಸಹಾಯಕ ಅಭಿಯೋಜಕರವರಿಂದಃ**

ನಾನು ಪಿಯುಸಿ ವರೆಗೆ ವಿದ್ಯಾಭ್ಯಾಸ ಮಾಡಿರುತ್ತೇನೆ. ನಾನು ಸಹಿ ಮಾಡುವಾಗ ದಾಖಲೆಗಳನ್ನು ಓದಿ ನೋಡಿ ಸಹಿ ಮಾಡುತ್ತೇನೆ ಎಂದರೆ ಸರಿ. ದಿಃ 26-12-2024 ರಂದು

**P.W**-1

ನನ್ನನ್ನು ಮತ್ತು ಚಾಸಾ-2 ರವರನ್ನು ಪೋಲಿಸರು ಮಹಜರ್ ಸಂಬಂಧ ಕರೆದಿದ್ದರು ಎಂದರೆ ಸರಿ. ಸ್ಥಳದಲ್ಲಿ ಅಪಘಾತ ಆದ ಬಗ್ಗೆ ಚಾಸಾ-1 ರವರು ಸ್ಥಳವನ್ನು ತೋರಿಸಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-2 ಭಾವಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1 ಕ್ಕೆ ಓದಿ ಹೇಳಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆ ಬಗ್ಗೆ ಮಾಹಿತಿ ಇದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಾದ ಶ್ರೀ ಎಸ್ ಎಸ್ ಎಂ ವಕೀಲರು ಏನೂ ಇಲ್ಲ ಎಂದು ನುಡಿಯುತ್ತಾರೆ.

**ಮರು ವಿಚಾರಣೆಃ ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/-

1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.